ಜನದನಿಯ ಸಾರಥಿ
ವಾರ್ತಾ ಭಾರತಿ

# ಮಂಗಳೂರು: ವಿಶ್ವ ಕೊಂಕಣಿ ಕೇಂದ್ರದಲ್ಲಿ ‘ಅಸ್ಮಿತಾ’ ಕಾರ್ಯಕ್ರಮ



ಮಂಗಳೂರು, ಮೇ 12: ವಿಶ್ವ ತಾಯಂದಿರ ದಿನದ ಅಂಗವಾಗಿ ಹೊಸದಿಲ್ಲಿಯ ಕೇಂದ್ರ ಸಾಹಿತ್ಯ ಅಕಾಡಮಿ ಮತ್ತು ವಿಶ್ವ ಕೊಂಕಣಿ ಕೇಂದ್ರದ ಸಹಯೋಗದೊಂದಿಗೆ ‘ಅಸ್ಮಿತಾ’ ವಿಶೇಷ ಕಾರ್ಯಕ್ರಮ ವಿಶ್ವ ಕೊಂಕಣಿ ಕೇಂದ್ರದಲ್ಲಿ ನಡೆಯಿತು.

ಸಾಹಿತ್ಯ ಅಕಾಡಮಿ ಯುವ ಪುರಸ್ಕಾರ ವಿಜೇತೆ ವಿಲ್ಮಾ ಬಂಟ್ವಾಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಡಯನಾ ಶರಲ್ ಲೋಬೊ, ಮೇರಿ ಸಲೋಮಿ ಡಿಸೋಜ ಕವಿತೆ, ಫ್ಲೆವಿ ಲೋಬೊ ಪ್ರಬಂಧ ಮತ್ತು ಸ್ಮಿತಾ ಷೆಣ್ವಿ ಸಣ್ಣ ಕತೆ ಪ್ರಸ್ತುತಪಡಿಸಿದರು. ಕೇಂದ್ರ ಸಾಹಿತ್ಯ ಅಕಾಡಮಿ ಕೊಂಕಣಿ ಸಲಹಾ ಸಮಿತಿ ಸಂಚಾಲಕ ಮೆಲ್ವಿನ್ ರೊಡ್ರಿಗಸ್ ಸಾಹಿತ್ಯ ಅಕಾಡಮಿಯ ಚಟುವಟಿಕೆಗಳು ಮತ್ತು ಅಸ್ಮಿತಾ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿಶ್ವ ಕೊಂಕಣಿ ಕೇಂದ್ರದ ಆಡಳಿತಾಧಿಕಾರಿ ಡಾ.ಬಿ.ದೇವದಾಸ ಪೈ ಸ್ವಾಗತಿಸಿದರು. ಸಾಹಿತ್ಯ ಅಕಾಡಮಿ ಕೊಂಕಣಿ ಸಲಹಾ ಸಮಿತಿ ಸದಸ್ಯ ಎಚ್.ಎಂ.ಪೆರ್ನಾಲ್ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಮಂಗಳೂರು, ಉಡುಪಿ, ಕೇರಳದಿಂದ ಸಾಹಿತಿಗಳು ಮತ್ತು ಸಾಹಿತ್ಯಾಸಕ್ತರು ಭಾಗವಹಿಸಿದ್ದರು.

Mangalore Edition

May 13, 2025 Page No. 4

Powered by: erelego.com